ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ : 88

ಸದಸ್ಯರ ಹೆಸರು : ಶ್ರೀ.ಎನ್.ಅಪ್ಪಾಜಿಗೌಡ

ಉತ್ತರಿಸುವ ಸಚಿವರು : ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 15.07.2019

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ದೇವಲಾಪುರ ಹೋಬಳಿ ಮಲ್ಲಸಂದ್ರಕಾವಲ್ ಬಳಿ ಇಲಾಖೆಯ ಸುಮಾರು 900 ಎಕರೆ ಜಾಗವಿದ್ದು ಈ ಸ್ಥಳದಲ್ಲಿ ತೋಟಗಾರಿಕೆ ಬೆಳೆಗಳ ತರಬೇತಿ ಕೇಂದ್ರ ಮತ್ತು ತೋಟಗಾರಿಕೆ ಕಾಲೇಜು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಈ ಕಾರ್ಯ ಯಾವ ಹಂತದಲ್ಲಿದೆ; ಈ ಯೋಜನೆಗೆ ಸರ್ಕಾರ ಅನುದಾನವನ್ನು ಮೀಸಲಿಡಲಾಗಿದೆಯೇ;	ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ದೇವಲಾಪುರ ಹೋಬಳಿ ಮಲ್ಲಸಂದ್ರಕಾವಲ್ ಬಳಿ ಇಲಾಖೆಯ ಸುಮಾರು 900 ಎಕರೆ ಜಾಗದಲ್ಲಿ ತೋಟಗಾರಿಕೆ ಕಾಲೇಜು ಸ್ಥಾಪಿಸಲು ಕೋರಿಕೆಗಳು ಬರುತ್ತಿದ್ದು, ಕಾಲೇಜು ಸ್ಥಾಪಿಸುವ ಯಾವುದೇ ಉದ್ದೇಶ ಸರ್ಕಾರದ ಮುಂದೆ ಇರುವುದಿಲ್ಲ.
ಆ)	ಮಲ್ಲಸಂದ್ರಕಾವಲ್ ತೋಟಗಾರಿಕೆ ಸಂಶೋಧನಾ ಕೇಂದ್ರದಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳ ಮತ್ತು ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಖಾಲಿ ಹುದ್ದೆ ಭರ್ತಿ ಮಾಡಲು ಹಾಗೂ ಮೂಲಭೂತ ಸೌಲಭ್ಯ ಒದಗಿಸಲು ತೆಗೆದುಕೊಂಡ ಕ್ರಮಗಳೇನು;	ಮಲ್ಲಸಂದ್ರಕಾವಲ್ ನಲ್ಲಿ ಪ್ರಸ್ತುತ ಯಾವುದೇ ತೋಟಗಾರಿಕೆ ಸಂಶೋಧನಾ ಕೇಂದ್ರ ಕಾರ್ಯ ನಿರ್ವಹಿಸುತ್ತಿಲ್ಲ.
ಇ)	ಈ ಕೇಂದ್ರದಲ್ಲಿ ಇಸ್ರೇಲ್ ಮಾದರಿಯ ತೋಟಗಾರಿಕೆ ಬೆಳೆಗಳನ್ನು ಪ್ರಾಯೋಗಿಕವಾಗಿ ಅಳವಡಿಸುವ ಯೋಜನೆ ಸರ್ಕಾರದ ಮುಂದೆ ಇದೆಯೇ; ಇದ್ದಲ್ಲಿ ಯಾವ ಬೆಳೆಗಳನ್ನು ಪ್ರಾಯೋಗಿಕವಾಗಿ ಅಳವಡಿಸಿಕೊಳ್ಳಲಾಗಿದೆ; ಇದರ ಸಾಧಕ-ಬಾಧಕಗಳೇನು?	ಉದ್ಭವಿಸುವುದಿಲ್ಲ.

ಕಡತ ಸಂಖ್ಯೆ: HORTI/60/HGM/2019-admn-Horti-Se

(ಎಂ.ಸಿ.ಮನಗೂಳಿ)
ತೋಟಗಾರಿಕೆ ಸಚಿವರು

ಎಂ.ಸಿ. ಮನಗೂಳಿ (ಸಿಂದಗಿ)
ತೋಟಗಾರಿಕೆ ಸಚಿವರು